# ಕರ್ನಾಟಕ ವಿಧಾನ ಪರಿಷತ್ತು

**<u>ಲಘು ಪ್ರಕಟಣೆ ಭಾಗ-2</u>**

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

**ಗುರುವಾರ, ದಿನಾಂಕ:08ನೇ ಜುಲೈ 2021**

**ಸಂಖ್ಯೆ: 51**

ಸರ್ಕಾರದ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳ ಇಲಾಖೆಯ ವತಿಯಿಂದ ದಿನಾಂಕ:29.04.2021 ರಂದು ಹೊರಡಿಸಿರುವ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ (ತಿದ್ದುಪಡಿ) ಅಧ್ಯಾದೇಶ, 2021 (ಕರ್ನಾಟಕ ಅಧ್ಯಾದೇಶ ಸಂಖ್ಯೆ-04) ಪ್ರತಿಯನ್ನು **https://erajyapatra.karnataka.gov.in/** ನಲ್ಲಿ ಅಥವಾ ವಿಧಾನ ಪರಿಷತ್ತಿನ ಅಂತರ್ಜಾಲ ತಾಣ **www.kla.kar.nic.in/council/council.htm** ದಲ್ಲಿ ಪಡೆದುಕೊಳ್ಳಬಹುದಾಗಿದೆ ಎಂದು ಈ ಮೂಲಕ ತಿಳಿಯಪಡಿಸಲಾಗಿಧೆ.

ಕೆ.ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ

**ವಿಧಾನ ಪರಿಷತ್ತಿನ ಮಾನ್ಯ ಶಾಸಕರುಗಳಿಗೆ.**

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IV A | ಬೆಂಗಳೂರು, ಗುರುವಾರ, ೨೯, ಏಪ್ರಿಲ್, ೨೦೨೧ (ವೈಶಾಖ, ೦೯, ಶಕವರ್ಷ, ೧೯೪೩)<br>BENGALURU, THURSDAY, 29, APRIL, 2021 (VAISHAKHA , 09, SHAKAVARSHA, 1943) | ನಂ. ೫೦೨<br>No. 502 |
|---|---|---|


## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 27 ಶಾಸನ 2021, ದಿನಾಂಕ: 29.04.2021**

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧ್ಯಾದೇಶ, 2021 ಇದಕ್ಕೆ 2021ರ ಏಪ್ರಿಲ್ ತಿಂಗಳ 29ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2021 ರ ಕರ್ನಾಟಕ ಆಧ್ಯಾದೇಶ ಸಂಖ್ಯೆ: 04 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

## 2021ರ ಕರ್ನಾಟಕ ಅಧ್ಯಾದೇಶ ಸಂಖ್ಯೆ: 04

## ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧ್ಯಾದೇಶ, 2021

(ಭಾರತ ಗಣರಾಜ್ಯದ ಎಪ್ಪತ್ತೆರಡನೇ ವರ್ಷದಲ್ಲಿ ಕರ್ನಾಟಕ ರಾಜ್ಯಪಾಲರಿಂದ ಪ್ರಖ್ಯಾಪಿತವಾಗಿ 2021ರ ಏಪ್ರಿಲ್ 29ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ, 2020ನ್ನು ತಿದ್ದುಪಡಿ ಮಾಡಲು ಒಂದು ಅಧ್ಯಾದೇಶ.

ಕರ್ನಾಟಕ ವಿಧಾನಸಭೆ ಮತ್ತು ಕರ್ನಾಟಕ ವಿಧಾನ ಪರಿಷತ್ತು ಅಧಿವೇಶನದಲ್ಲಿ ಇಲ್ಲದಿರುವುದರಿಂದ ಮತ್ತು ಸದ್ಯದಲ್ಲಿ ಸಭೆ ಸೇರುವ ಸಂಭವವಿಲ್ಲದಿರುವುದರಿಂದ ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಅಧ್ಯಾದೇಶವನ್ನು ಪ್ರಖ್ಯಾಪಿಸಲು, ಶೀಘ್ರ ಕ್ರಮವನ್ನು ತೆಗೆದುಕೊಳ್ಳುವುದು ಅವಶ್ಯಗೊಳಿಸುವಂಥ ವಿದ್ಯಮಾನಗಳು ಉಂಟಾಗಿವೆಯೆಂದು ಕರ್ನಾಟಕ ಮಾನ್ಯ ರಾಜ್ಯಪಾಲರಿಗೆ ಮನದಟ್ಟಾಗಿರುವುದರಿಂದ;

ಆದ್ದರಿಂದ ಈಗ, ಭಾರತ ಸಂವಿಧಾನದ 213ನೇ ಅನುಚ್ಛೇದದ (1)ನೇ ಖಂಡದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಕರ್ನಾಟಕದ ರಾಜ್ಯಪಾಲರು ಈ ಮುಂದಿನ ಅಧ್ಯಾದೇಶವನ್ನು ಪ್ರಖ್ಯಾಪಿಸಿದ್ದಾರೆ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-**(1) ಈ ಅಧ್ಯಾದೇಶವನ್ನು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧ್ಯಾದೇಶ, 2021 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 10ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧಿನಿಯಮ, 2020ರ (2020ರ ಕರ್ನಾಟಕ ಅಧಿನಿಯಮ 04) 10ನೇ ಪ್ರಕರಣದ (5)ನೇ ಉಪಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(6) ಕಡ್ಡಾಯ ವರ್ಗಾವಣೆ, ವಲಯ ವರ್ಗಾವಣೆಯ ಮೇಲೆ ಅಥವಾ ಸಮರ್ಪಕ ಮರುಹಂಚಿಕೆಯ ಮೇರೆಗೆ 2019-20ನೇ ವರ್ಷದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕನ ಸಂದರ್ಭದಲ್ಲಿ ತಾಲ್ಲೂಕಿನ ಹೊರಗೆ ಅಥವಾ ಪ್ರೌಢಶಾಲಾ ಶಿಕ್ಷಕನ ಸಂದರ್ಭದಲ್ಲಿ ಜಿಲ್ಲೆಯ ಹೊರಗೆ ವರ್ಗಾವಣೆಗೊಂಡ ಶಿಕ್ಷಕನ ಸಂಬಂಧದಲ್ಲಿ,. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧ್ಯಾದೇಶ, 2021ರ ಪ್ರಾರಂಭದ ದಿನಾಂಕದ ನಿಕಟ ತರುವಾಯ ಮಾಡುವ ವರ್ಗಾವಣೆಯಲ್ಲಿ 2019-2020ನೇ ಸಾಲಿನಲ್ಲಿ ವರ್ಗಾವಣೆ ಪೂರ್ವದಲ್ಲಿ ಎಲ್ಲಿ ಕಾರ್ಯನಿರ್ವಹಿಸುತ್ತಿದ್ದರೋ ಆ ಸಂಬಂಧಪಟ್ಟ ತಾಲ್ಲೂಕು ಅಥವಾ ಜಿಲ್ಲೆಯೊಳಗೆ ಸ್ಥಳನಿಯುಕ್ತಿಯ ಪ್ರಯೋಜನವನ್ನು ನೀಡುವುದಕ್ಕಾಗಿ, ಮುಂಬರುವ ಇತರ ರೀತಿಯ ವರ್ಗಾವಣೆಗಳಿಗೆ ಪೂರ್ವದಲ್ಲಿ ಖಾಲಿ ಹುದ್ದೆಗಳ ಲಭ್ಯತೆಗೆ ಒಳಪಟ್ಟು ಅವರು ಕಾರ್ಯನಿರ್ವಹಿಸುತ್ತಿರುವ ತಾಲ್ಲೂಕು ಅಥವಾ ಜಿಲ್ಲೆಯೊಳಗೆ ಒಂದು ಸಲದ ಕ್ರಮವಾಗಿ (one time measure) ನಿಯಮಿಸಬಹುದಾದಂತಹ ರೀತಿಯಲ್ಲಿ ವರ್ಗಾವಣೆಯ ಸ್ಥಳವನ್ನು ಆಯ್ಕೆಮಾಡಲು ಅವಕಾಶವನ್ನು ಸಹ ಒದಗಿಸತಕ್ಕದ್ದು."

**ವಜೂಭಾಯಿವಾಲಾ**
ಕರ್ನಾಟಕದ ರಾಜ್ಯಪಾಲರು

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಕೆ. ದ್ವಾರಕನಾಥ್ ಬಾಬು)**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ
ರಚನೆ ಇಲಾಖೆ

**PARLIAMENTARY AFFAIRS AND LEGISLATION SECRETARIAT**

**NOTIFICATION**

**NO. DPAL 27 SHASANA 2021, BENGALURU, DATED: 29.04.2021**

ಭಾರತ ಸಂವಿಧಾನದ ಅನುಚ್ಛೇಧ 348ರ ಖಂಡ (3)ರ ಅಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಅಧ್ಯಾದೇಶ, 2021 (2021ರ ಕರ್ನಾಟಕ ಅಧ್ಯಾದೇಶ ಸಂಖ್ಯೆ: 04)ರ ಭಾಷಾಂತರವನ್ನು ಅಧಿಕೃತ ಆಂಗ್ಲ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**KARNATAKA ORDINANCE NO. 04 OF 2021**

**THE KARNATAKA STATE CIVIL SERVICES (REGULATION OF TRANSFER OF TEACHERS) (AMENDMENT) ORDINANCE, 2021**

(Promulgated by the Governor of Karnataka in the Seventy second year of the Republic of India and First published in the Karnataka Gazette Extra-ordinary on the 29th of April, 2021)

An ordinance to amend the Karnataka State Civil Services (Regulation of Transfer of Teachers) Act, 2020 (Karnataka Act 04 of 2020).

Whereas the Karnataka Legislative Assembly and the Karnataka Legislative Council are not in session and not likely to meet in near future the Governor of Karnataka is satisfied that the circumstances exist which render it necessary for him to take immediate action to promulgate the Ordinance for the purposes hereinafter appearing;

Now, therefore, in exercise of the powers conferred by clause (1) of Article 213 of the Constitution of India, the Governor of Karnataka is pleased to promulgate the following Ordinance, namely:-

1. **Short title and commencement.**- (1) This Ordinance may be called the Karnataka State Civil Services (Regulation of Transfer of Teachers) (Amendment) Ordinance, 2021.

(2) It shall come into force at once.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



**2. Amendment of section 10.-** In the Karnataka State Civil Services (Regulation of Transfer of Teachers) Act, 2020 (Karnataka Act 04 of 2020), in section 10, after sub-section (5), the following shall be inserted, namely:-

"(6) In case of a teacher who was transferred on compulsory transfer, zonal transfer or under rationalisation outside the taluk in case of a primary school teacher or district in case of a high school teacher during the year 2019-20 shall also be provided an opportunity to opt a place of transfer within the taluk or district where they were working during the year 2019-20 as a onetime measure ahead of other types of transfers subject to the availability of vacancies so as to give the benefit of posting within the concerned taluk or district in the transfer done immediately after the date of commencement of the Karnataka State Civil Services (Regulation of Transfer of Teachers) (Amendment) Act, 2021 in the manner as may be prescribed."

The above translation of **ಕರ್ನಾಟಕ ರಾಜ್ಯ ಸಿವಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂಣ (ತಿದ್ದುಪಡಿ) ಅಧ್ಯಾದೇಶ, 2021** (2021ರ ಕರ್ನಾಟಕ ಅಧ್ಯಾದೇಶ ಸಂಖ್ಯೆ: 04) be published in the Official Gazette under clause (3) of Article 348 of the Constitution of India.

**VAJUBHAI VALA**
**GOVERNOR OF KARNATAKA**

By order and in the name of the
Governor of Karnataka,

**(K. DWARAKANATH BABU)**
Secretary to Government
Department of Parliamentary Affairs and
Legislation.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು. ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು